# All India Radio: Bangalore
## Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

05.03.2026 6.40 p.m.

**************

ಮುಖ್ಯಾಂಶಗಳು

೧. ದೇಶದ ಅಭಿವೃದ್ಧಿ - ಪರಂಪರೆ ಜೊತೆ ಜೊತೆಯಾಗಿ ಸಾಗಲಿ - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಆಶಯ

೨. ರಾಜ್ಯ ವಿಧಾನಮಂಡಲದ ಮುಂದುವರೆದ ಉಪವೇಶನ ನಾಳೆ ಆರಂಭ; ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ದಾಖಲೆಯ ೧೭ನೇ ಬಾರಿ ಬಜೆಟ್ ಮಂಡನೆ

೩. ರಾಜ್ಯ ಸರ್ಕಾರದಿಂದ ಆರ್ಥಿಕ ಶಿಸ್ತು ಮೀರಿ ಸಾಲ; ವಿಪಕ್ಷ ನಾಯಕ ಆರ್. ಅಶೋಕ ಟೀಕೆ

೪. ನಾಳೆ ಬೆಂಗಳೂರಿನಲ್ಲಿ ಮೈ ಭಾರತ್ ಎನ್‌ಎಸ್‌ಎಸ್ ಚಿಂತನ ಶಿಬಿರ; ಕೇಂದ್ರ ಕ್ರೀಡಾ ಸಚಿವರುಗಳು ಭಾಗಿ

೫. ಕಲಬುರಗಿ ಐಟಿಎಫ್ ಮಹಿಳಾ ಟೆನಿಸ್; ಭಾರತದ ಸೊನಾಲ್ ಮತ್ತು ಬೆಲಾ ಜೋಡಿ ಸೆಮಿಫೈನಲ್ಸ್‌ಗೆ

**************

ಭಾರತದ ಅಭಿವೃದ್ಧಿ ಮತ್ತು ಪರಂಪರೆ ಜೊತೆಜೊತೆಯಾಗಿ ಸಾಗಬೇಕು ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದ್ದಾರೆ.

ಅವರು ಇಂದು ಬೆಳಗಾವಿ ಜಿಲ್ಲೆಯ ಯಡೂರಿನ ಶ್ರೀ ವೀರಭದ್ರೇಶ್ವರ ದೇವಸ್ಥಾನದ ರಾಜಗೋಪುರ ಉದ್ಘಾಟನೆ, ಕಳಸಾರೋಹಣ ಮತ್ತು ಮಹಾಕುಂಭಾಭಿಷೇಕ ಮಹೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದರು. ಭಾರತವು ಇಂದು ತಾಂತ್ರಿಕವಾಗಿ ಮುಂದುವರಿದ, ಆರ್ಥಿಕವಾಗಿ ಸದೃಢವಾದ ಮತ್ತು ಜಾಗತಿಕವಾಗಿ ಪ್ರಭಾವಶಾಲಿ ರಾಷ್ಟ್ರವಾಗಿ ಪ್ರಗತಿ ಹೊಂದುತ್ತಿದೆ, ಅದೇ ಸಮಯದಲ್ಲಿ ತನ್ನ ನಾಗರಿಕತೆಯ ಮೌಲ್ಯಗಳಲ್ಲಿ ದೃಢವಾಗಿ ಬೇರೂರಿದೆ ಎಂದು ಅವರು ಹೇಳಿದರು.

ಈ ಸಂದರ್ಭವನ್ನು ಆಧ್ಯಾತ್ಮಿಕ ಪುನರುತ್ಥಾನ ಮತ್ತು ನಾಗರಿಕತೆಯ ಪುನಶ್ಚೇತನದ ಕ್ಷಣ ಎಂದು ಬಣ್ಣಿಸಿದ ಅವರು ಭಾರತ, ಜೀವಂತ ನಾಗರಿಕತೆ, ಸಿಂಧೂ ಕಣಿವೆಯಿಂದ ಕನ್ಯಾಕುಮಾರಿಯವರೆಗೆ

ಹರಿಯುತ್ತಿರುವ ಅವಿಚ್ಛಿನ್ನ ಪ್ರಜ್ಞೆಯ ಪ್ರವಾಹವಾಗಿದೆ; ವೇದಗಳ ಶಾಶ್ವತ ಜ್ಞಾನವು ಮೊದಲು ಮೊಳಗಿದ ಪವಿತ್ರ ಭೂಮಿ ಇದಾಗಿದೆ. ಭಗವದ್ಗೀತೆಯ ಗಹನವಾದ ಸಂದೇಶವು ಮಾನವಕುಲಕ್ಕೆ ಧೈರ್ಯದಿಂದ ಕರ್ತವ್ಯ ನಿರ್ವಹಿಸಲು, ಧರ್ಮದ ಹಾದಿಯಲ್ಲಿ ಬದುಕಲು ಮತ್ತು ಅಚಲ ನಂಬಿಕೆಯೊಂದಿಗೆ ಶರಣಾಗಲು ಇಂದಿಗೂ ದಾರಿದೀಪವಾಗಿದೆ ಎಂದು ಅಭಿಪ್ರಾಯಪಟ್ಟರು.

***ಧ್ವನಿ***ಸಿ.ಪಿ. ರಾಧಾಕೃಷ್ಣನ್

ಹಿಂದೂ ಪ್ರಜ್ಞೆಯು ಕೇವಲ ಆಚರಣೆಗಳಿಗೆ ಸೀಮಿತವಾಗಿಲ್ಲ, ಅದೊಂದು ಜೀವನ ವಿಧಾನ ಎಂದು ಅವರು ಹೇಳಿದರು.

ವೀರಶೈವ ಮಠಗಳು ಮತ್ತು ದೇವಾಲಯಗಳು ನಂಬಿಕೆ, ಸೇವೆ ಮತ್ತು ಸಾಮಾಜಿಕ ಸಾಮರಸ್ಯದ ಮೌಲ್ಯಗಳನ್ನು ಪೋಷಿಸುವಲ್ಲಿ ಮಹತ್ವದ ಪಾತ್ರವನ್ನು ವಹಿಸಿವೆ ಎಂದು ಅವರು ಹೇಳಿದರು.

ಕಾಲಕ್ರಮೇಣ ಮರೆಯಾಗಿದ್ದ ಪವಿತ್ರ ಸ್ಥಳವನ್ನು ಮರುಶೋಧಿಸಿ, ಪುನರುಜ್ಜೀವನಗೊಳಿಸುವ ಮೂಲಕ ಸನಾತನ ಧರ್ಮದ ಶಾಶ್ವತ ಜ್ಯೋತಿಯನ್ನು ಮರುಸೃಷ್ಟಿಸಿದ ಶಿವಯೋಗಿ ಕಾಡಸಿದ್ಧೇಶ್ವರ ಸ್ವಾಮೀಜಿಯವರ ಆಧ್ಯಾತ್ಮಿಕ ದೃಷ್ಟಿಕೋನಕ್ಕೆ ಉಪರಾಷ್ಟ್ರಪತಿಯವರ ಗೌರವ ಸಲ್ಲಿಸಿದರು. ಸನಾತನ ಧರ್ಮವು ಕಾಲಕಾಲಕ್ಕೆ ಪರೀಕ್ಷಿಸಲ್ಪಡಬಹುದು, ಆದರೆ ಅದನ್ನು ಎಂದಿಗೂ ಅಳಿಸಲು ಸಾಧ್ಯವಿಲ್ಲ ಎಂದು ಅವರು ಹೇಳಿದರು.

ಪವಿತ್ರ ಸ್ಥಳಗಳ ಪುನರುಜ್ಜೀವನವು ಸಾಂಸ್ಕೃತಿಕ ಆತ್ಮವಿಶ್ವಾಸ ಮತ್ತು ಆಧ್ಯಾತ್ಮಿಕ ಜಾಗೃತಿಯನ್ನು ಮರುಸ್ಥಾಪಿಸುವುದಾಗಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಹೇಳಿದರು.

ಈ ಸಂದರ್ಭದಲ್ಲಿ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್; ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಮತ್ತು ಇತರ ಗಣ್ಯರು ಸಮಾರಂಭದಲ್ಲಿ ಭಾಗವಹಿಸಿದ್ದರು.

**************

ರಾಜ್ಯ ವಿಧಾನಮಂಡಲದ ಮುಂದುವರೆದ ಉಪವೇಶನ ನಾಳೆ ಆರಂಭವಾಗಲಿದೆ. ತಾತ್ಕಾಲಿಕ ಕಾರ್ಯಕ್ರಮ ಪಟ್ಟಿಯಂತೆ ಸದನಗಳು ೧೪ ದಿನಗಳ ಕಾಲ ಕಲಾಪ ನಡೆಸಲಿವೆ. ಸದನಗಳು ಈ ತಿಂಗಳ ೨೭ರ ವರೆಗೆ ನಡೆಯಲಿವೆ.

ಹಣಕಾಸು ಖಾತೆಯನ್ನೂ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯದ ೨೦೨೬-೨೭ನೇ ಸಾಲಿನ ಆಯವ್ಯಯವನ್ನು ನಾಳೆ ಬೆಳಿಗ್ಗೆ ಮಂಡಿಸಲಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸುತ್ತಿರುವ ೧೭ನೇ ಬಾರಿಯ ದಾಖಲೆಯ ಬಜೆಟ್ ಇದಾಗಿದೆ.

**************

ರಾಜ್ಯದ ಆಯ್ದ ಬಸ್ ನಿಲ್ದಾಣಗಳಲ್ಲಿ ಬಜೆಟ್ ಮಂಡನೆಯ ನೇರಪ್ರಸಾರಕ್ಕಾಗಿ ವ್ಯವಸ್ಥೆ ಮಾಡಲಾಗಿದೆ. ೨೩೦ ಸರ್ಕಾರಿ ಬಸ್ ನಿಲ್ದಾಣಗಳಲ್ಲಿ ಪ್ರಸಾರ ಮಾಡಲು ಉದ್ದೇಶಿಸಿದೆ.

ಈ ಮಹತ್ವದ ಬಜೆಟ್ ಮಂಡನೆಯ ನೇರ ಪ್ರಸಾರವನ್ನು ರಾಜ್ಯದ ಜನತೆಗೆ ತಲುಪಿಸುವ ಉದ್ದೇಶದಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ಈ ವ್ಯವಸ್ಥೆ ಮಾಡಲಾಗಿದೆ.

ಬಜೆಟ್ ಮಂಡನೆ ಹಾಗೂ ಬಳಿಕ ನಡೆಯಲಿರುವ ಮುಖ್ಯಮಂತ್ರಿಗಳ ಪತ್ರಿಕಾಗೋಷ್ಠಿಯ ನೇರ ಪ್ರಸಾರವನ್ನು ಜನರು ವೀಕ್ಷಿಸಬಹುದಾಗಿದೆ.

**************

ರಾಜ್ಯ ಮುಂಗಡಪತ್ರ ಕುರಿತ ವಿಶೇಷ ಚರ್ಚಾ ಕಾರ್ಯಕ್ರಮ ಬೆಂಗಳೂರು ಆಕಾಶವಾಣಿ ಸುದ್ದಿ ವಿಭಾಗದಿಂದ ನಾಳೆ ರಾತ್ರಿ ೮ ರಿಂದ ೮.೩೦ರ ವರೆಗೆ ಪ್ರಸಾರವಾಗಲಿದೆ.

ಹಿರಿಯ ಪತ್ರಕರ್ತೆ ಡಾ. ಆಶಾ ಕೃಷ್ಣಸ್ವಾಮಿ ಹಾಗೂ ಹಿರಿಯ ಪತ್ರಕರ್ತ ನಾರಾಯಣಸ್ವಾಮಿ ಬಿ.ಎಸ್. ಬಜೆಟ್ ಬಗ್ಗೆ ವಿಶೇಷ ಸಂವಾದ ನಡೆಸಲಿದ್ದಾರೆ.

ನಾಳಿನ ಮಧ್ಯಾಹ್ನದ ಪ್ರದೇಶ ಸಮಾಚಾರ ಹೆಚ್ಚುವರಿ ಅವಧಿಯಲ್ಲಿ ೨.೩೦ ರಿಂದ ೨.೪೫ರ ವರೆಗೆ ಹಾಗೂ ಸಂಜೆ ಪ್ರದೇಶ ಸಮಾಚಾರ ೬.೪೦ ರಿಂದ ೬.೫೫ರ ವರೆಗೆ ಮೂಡಿಬರಲಿದೆ.

**************

ರಾಜ್ಯದಲ್ಲಿನ ಮಹಿಳೆಯರ ಸ್ಥಿತಿಗತಿ ಕುರಿತಂತೆ ಸಮಗ್ರ ವರದಿಯನ್ನು ಜಿಲ್ಲಾ ಪ್ರವಾಸದ ನಂತರ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಹೇಳಿದ್ದಾರೆ. ಅವರು ಮಂಗಳೂರಿನಲ್ಲಿಂದು

ಬಲ್ಮಠದಲ್ಲಿನ ಸರ್ಕಾರಿ ಮಹಿಳಾ ಪದವಿ ಕಾಲೇಜಿಗೆ ಭೇಟಿ ನೀಡಿ ವಿದ್ಯಾರ್ಥಿನಿಯರೊಂದಿಗೆ ಸಂವಾದ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ಇದುವರೆಗೆ ರಾಜ್ಯದ ೨೬ ಜಿಲ್ಲೆಗಳಿಗೆ ಭೇಟಿ ನೀಡಿ, ಮಹಿಳೆಯರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಲಾಗಿದೆ. ಎಲ್ಲಾ ಜಿಲ್ಲೆಗಳ ಭೇಟಿ ಪೂರ್ಣಗೊಂಡ ಬಳಿಕ ರಾಜ್ಯದಲ್ಲಿನ ಮಹಿಳೆಯರ ಸ್ಥಿತಿಗತಿ, ದೌರ್ಜನ್ಯ

ಪ್ರಕರಣಗಳು ಸೇರಿದಂತೆ ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಅವರು ಹೇಳಿದರು.

ಮಹಿಳೆಯರ ಮೇಲಿನ ದೌರ್ಜನ್ಯ ಹೆಚ್ಚಾಗಲು ಮೊಬೈಲ್‌ಗಳಲ್ಲಿನ ಅಶ್ಲೀಲ ವಿಡಿಯೋಗಳು ಕೂಡ ಕಾರಣವಾಗುತ್ತಿದೆ. ವಿದ್ಯಾರ್ಥಿಗಳು ಮಾದಕ ದ್ರವ್ಯ ಸೇವನೆಯಂತಹ ಚಟಗಳಿಗೆ ಬಲಿಯಾಗುತ್ತಿದ್ದು, ಈ ನಿಟ್ಟಿನಲ್ಲಿ ಸಮಾಜ ಜಾಗೃತವಾಗಬೇಕಿದೆ. ಪ್ರತಿ ಮನೆಯಲ್ಲಿ ತಮ್ಮ ಮಕ್ಕಳ ಬಗ್ಗೆ ವಿಶೇಷ ಕಾಳಜಿ ವಹಿಸಬೇಕು ಎಂದು ಡಾ. ನಾಗಲಕ್ಷ್ಮಿ ಚೌಧರಿ ಹೇಳಿದರು.

**************

ರಾಜ್ಯ ಸರ್ಕಾರ ಆರ್ಥಿಕ ಶಿಸ್ತನ್ನು ಮೀರಿ ಸಾಲ ಮಾಡಿದೆ ಎಂದು ರಾಜ್ಯ ವಿಧಾನಸಭೆಯಲ್ಲಿನ ಪ್ರತಿಪಕ್ಷ ನಾಯಕ ಆರ್.ಅಶೋಕ ಟೀಕಿಸಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಸರ್ಕಾರ ಚುನಾವಣೆ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಜನರ ಮೇಲೆ ತೆರಿಗೆ ಹೊರೆ ಇಲ್ಲದೆ ಗ್ಯಾರಂಟಿ ಯೋಜನೆಗಳನ್ನು ನೀಡಬೇಕಾಗಿತ್ತು. ಸರ್ಕಾರ ಇದುವರೆಗೆ ೬ ಲಕ್ಷ ಕೋಟಿ ರೂಪಾಯಿ ಸಾಲ ಮಾಡಿದೆ ಎಂದು ಹೇಳಿದ್ದಾರೆ.

ಈ ಬಾರಿ ಮುಖ್ಯಮಂತ್ರಿ ಸಿದ್ದರಾಮಯ್ಯ ೧.೧೫ ಲಕ್ಷ ಕೋಟಿ ರೂಪಾಯಿ ಸಾಲ ಮಾಡಿ ಬಜೆಟ್ ಮಂಡಿಸಲಿದ್ದಾರೆ. ಈ ಬಾರಿಯೂ ಜನರ ಮೇಲೆ ತೆರಿಗೆಗಳ ಹೊರೆ ಹಾಕುವುದು ಖಚಿತ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ನಂಜುಂಡಪ್ಪ ವರದಿಯಲ್ಲಿದ್ದ ಹಿಂದುಳಿದ ತಾಲೂಕುಗಳ ಸಂಖ್ಯೆ, ಗೋವಿಂದರಾವ್ ವರದಿಯಲ್ಲಿ ಇನ್ನಷ್ಟು ಅಧಿಕವಾಗಿದೆ ಎಂದು ಹೇಳಿದ ಆರ್. ಅಶೋಕ, ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಪ್ರತಿ ವರ್ಷ ೧೫,೦೦೦ ಕೋಟಿ ರೂಪಾಯಿ ಮೀಸಲಿಡಬೇಕೆಂದು ಸರ್ಕಾರಕ್ಕೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಹುದ್ದೆಗಾಗಿ ಸ್ಪರ್ಧೆ ನಡೆಯುತ್ತಿದೆ. ತೆರಿಗೆಗಳನ್ನು ಸಂಗ್ರಹಿಸುವುದರಲ್ಲೂ ಸರ್ಕಾರ ವಿಫಲವಾಗಿದ್ದು, ಕೇವಲ ಶೇಕಡ ೪೮ರಷ್ಟು ಸಾಧನೆ ಆಗಿದೆ. ನಿಗದಿ ಮಾಡಿದ ಅನುದಾನದಲ್ಲಿ ಕೆಲವು ಇಲಾಖೆಗಳಿಗೆ ಶೇಕಡ ೪೦ರಷ್ಟು ಹಣವನ್ನೂ ಬಿಡುಗಡೆ ಮಾಡಿಲ್ಲ ಎಂದು ಆರ್. ಅಶೋಕ ಆಪಾದಿಸಿದ್ದಾರೆ.

**************

ಮುಖ್ಯಮಂತ್ರಿ ಸಿದ್ದರಾಮಯ್ಯ ಜನತೆಗೆ ಅನುಕೂಲವಾಗುವ ಬಜೆಟ್ ನೀಡಬೇಕು ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಆಗ್ರಹಪಡಿಸಿದ್ದಾರೆ. ಅವರು, ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಸೋಮಹಳ್ಳಿ ಗ್ರಾಮದಲ್ಲಿ ನಡೆದ ಧಾರ್ಮಿಕ ಕಾರ್ಯಕ್ರಮದ ಬಳಿಕ

ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರು, ಅನೇಕ ಬಜೆಟ್ ಮಂಡನೆ ಮಾಡಿ ಈಗ ಮತ್ತೊಂದು ಬಜೆಟ್ ಮಂಡನೆ ಮಾಡುತ್ತಿದ್ದಾರೆ. ನಾಡಿನ ಆರ್ಥಿಕ ಪರಿಸ್ಥಿತಿ ಸರಿಯಿಲ್ಲ ಅದನ್ನು ಗಮನದಲ್ಲಿಟ್ಟು ಕೊಳ್ಳಬೇಕು ಎಂದರು.

ಗ್ಯಾರಂಟಿ ಯೋಜನೆಯನ್ನು ಸರ್ಕಾರವೇ ಸರಿದೂಗಿಸಿಕೊಂಡು ಹೋಗಬೇಕು ಎಂದು ಯಡಿಯೂರಪ್ಪ ಅಭಿಪ್ರಾಯಪಟ್ಟರು.

**************

ಕೇಂದ್ರ ಮತ್ತು ರಾಜ್ಯ ಸರ್ಕಾರದ ಬ್ಯಾಂಕ್ ವಲಯ ಯೋಜನೆಗಳನ್ನು ಜನರಿಗೆ ತಲುಪಿಸಲು ಸರ್ಕಾರಿ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಈ.ತುಕಾರಾಮ್ ಹೇಳಿದ್ದಾರೆ.

ಅವರು ಇಂದು ಬಳ್ಳಾರಿಯಲ್ಲಿ ಲೀಡ್ ಬ್ಯಾಂಕ್‌ನ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ವಿವಿಧ ಜನಪರ ಯೋಜನೆಗಳ ಆರ್ಥಿಕ ಸೌಲಭ್ಯವನ್ನು ಬ್ಯಾಂಕ್‌ಗಳ ಮುಖಾಂತರ ನಿಗದಿತ ಕಾಲಮಿತಿಯಲ್ಲಿಯೇ ದೊರಕಿಸಿದರೆ ಫಲಾನುಭವಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದರು.

**************

ಮೈ ಭಾರತ್ ಎನ್‌ಎಸ್‌ಎಸ್ ಚಿಂತನ ಶಿಬಿರ ನಾಳೆ ಬೆಂಗಳೂರಿನಲ್ಲಿ ಆರಂಭವಾಗಲಿದೆ. ಕೇಂದ್ರ ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹಾಗೂ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ದೇಶವನ್ನು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸುವ ಗುರಿಯ ಹಿನ್ನೆಲೆಯಲ್ಲಿ ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ಅಮೃತ ಪೀಳಿಗೆಯನ್ನು ತೊಡಗಿಸುವ ಉದ್ದೇಶವನ್ನು ಈ ಕಾರ್ಯಕ್ರಮ ಹೊಂದಿದೆ.

ಯುವಜನ ವ್ಯವಹಾರ ಸಚಿವಾಲಯ ಎರಡು ದಿನಗಳ ಈ ಚಿಂತನ ಶಿಬಿರ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ತೆಲಂಗಾಣ, ಆಂಧ್ರಪ್ರದೇಶ, ಕರ್ನಾಟಕ, ತಮಿಳುನಾಡು, ಕೇರಳಂ, ಅಂಡಮಾನ್ ಮತ್ತು ನಿಕೋಬಾರ್, ಲಕ್ಷದ್ವೀಪ, ಒಡಿಶಾ, ಚತ್ತೀಸ್‌ಗಢ ಮತ್ತು ಮಹಾರಾಷ್ಟ್ರಗಳ ಎನ್‌ಎಸ್‌ಎಸ್ ಅಧಿಕಾರಿಗಳು ಇದರಲ್ಲಿ ಪಾಲ್ಗೊಳ್ಳಲಿದ್ದಾರೆ.

**************

ಭಾರತದ ಸೊನಾಲ್ ಪಾಟೀಲ್ ಮತ್ತು ಬೆಲಾ ತಮ್ಹನ್‌ಕರ್ ಜೋಡಿ ಕಲಬುರಗಿಯಲ್ಲಿ ನಡೆಯುತ್ತಿರುವ ಐಟಿಎಫ್ ಮಹಿಳಾ ಡಬ್ಲ್ಯೂ-೩೫ ಟೆನಿಸ್ ಟೂರ್ನಿಯ ಸೆಮಿಫೈನಲ್ಸ್ ಪ್ರವೇಶಿಸಿದೆ.

ಭಾರತದ ಅಂಕಿತಾ ರೈನಾ ಹಾಗೂ ವೈಷ್ಣವಿ ಅಡ್ಕರ್ ಟೂರ್ನಿಯ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

**************

ಹೋಳಿ ಹಬ್ಬದ ಪ್ರಯುಕ್ತ ನಡೆಯುವ ಹುಬ್ಬಳ್ಳಿ ಜಗ್ಗಲಗಿ ಹಬ್ಬಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಇಂದು ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಮೂರು ಸಾವಿರ ಮಠದ ಗುರು ಸಿದ್ದರಾಜಯೋಗಿಂದ್ರ ಸ್ವಾಮೀಜಿ ಹಾಗೂ ಅನೇಕ ಮಠಾಧೀಶರು ಪಾಲ್ಗೊಂಡಿದ್ದರು.

ಹಬ್ಬದ ಮೆರವಣಿಗೆಯಲ್ಲಿ ಒಂದು ಸಾವಿರದ ೫೦೦ಕ್ಕೂ ಅಧಿಕ ಕಲಾವಿದರು ಭಾಗವಹಿಸಿದ್ದರು.

**************

ಕೃಷಿ ಕ್ಷೇತ್ರದಲ್ಲಿ ಯಾಂತ್ರೀಕರಣದ ಮಹತ್ವವನ್ನು ರೈತರಿಗೆ ಪರಿಚಯಿಸುವ ಉದ್ದೇಶದಿಂದ ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ವತಿಯಿಂದ “ಕೃಷಿ ಯಂತ್ರೋಪಕರಣ ಮತ್ತು ತಂತ್ರಜ್ಞಾನಗಳ ಪ್ರಾತ್ಯಕ್ಷಿಕೆ ಮೇಳ”ವನ್ನು ಇಂದು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕುಲಪತಿ ಡಾ. ಕೆ.ಸಿ. ನಾರಾಯಣಸ್ವಾಮಿ, ಅಭಿವೃದ್ಧಿ ಹೊಂದಿದ ಪಶ್ಚಿಮ ರಾಷ್ಟ್ರಗಳಲ್ಲಿ ಕೃಷಿಯಲ್ಲಿ ಸುಮಾರು ೮೦ ರಿಂದ ೯೦ ಶೇಕಡಾ ಮಟ್ಟದಲ್ಲಿ ಯಂತ್ರೋಪಕರಣಗಳ ಬಳಕೆ ನಡೆಯುತ್ತಿದೆ. ಕರ್ನಾಟಕ ರಾಜ್ಯದ ರೈತರು ಸಹ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಯಂತ್ರೋಪಕರಣಗಳನ್ನು ಬಳಸುವ ಮೂಲಕ ಉತ್ಪಾದಕತೆ ಮತ್ತು ಆರ್ಥಿಕ ಮಟ್ಟವನ್ನು ಹೆಚ್ಚಿಸಿಕೊಳ್ಳಬೇಕೆಂದು ಹೇಳಿದರು.

ಈ ಮೇಳದಲ್ಲಿ ಸುಮಾರು ೫೦ಕ್ಕೂ ಹೆಚ್ಚು ಕೃಷಿ ಯಂತ್ರೋಪಕರಣಗಳಿಗೆ ಸಂಬಂಧಿಸಿದ ಮಳಿಗೆಗಳನ್ನು ಏರ್ಪಡಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಸುಮಾರು ೫೦೦ಕ್ಕೂ ಹೆಚ್ಚು ರೈತರು ಭಾಗವಹಿಸಿ ವಿವಿಧ ಕೃಷಿ ಯಂತ್ರೋಪಕರಣಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

*******ಮುಕ್ತಾಯ*******